# ಸಿದ್ದರಾಮಯ್ಯ ಸೇರಿ ಹಲವರಿಗೆ ಹೈ ನೋಟಿಸ್

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಪೊಲೀಸ್ ಅಧಿಕಾರಿಗಳ ವರ್ಗಾವಣೆಯಲ್ಲಿ ರಾಜಕಾರಣಿಗಳ ಶಿಫಾರಸು ವಿಚಾರವನ್ನು ಎಸ್‌ಐಟಿ ತನಿಖೆಗೆ ವಹಿಸುವಂತೆ ಕೋರಿ ಸಲ್ಲಿಸಿದ್ದ ಮಧ್ಯಂತರ ಅರ್ಜಿ ಸಂಬಂಧ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಸೇರಿ 24 ರಾಜಕೀಯ ಮುಖಂಡರುಗಳಿಗೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಕಾಂಗ್ರೆಸ್ ಶಾಸಕರ ಶಿಫಾರಸ್ಸಿನಂತೆ ನಡೆಸಲಾದ ಪೊಲೀಸರ ವರ್ಗಾವಣೆ ವಿರುದ್ಧ ಪೊಲೀಸ್ ಮಹಾ ಸಂಘದ ಅಧ್ಯಕ್ಷ ವಿ.ಶಶಿಧರ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕಾ ಮತ್ತು ನ್ಯಾಯಮೂರ್ತಿ ಮಹಮ್ಮದ್ ನವಾಝ್ ಅವರಿದ್ದ ವಿಭಾಗೀಯ



ನ್ಯಾಯ ಪೀಠದಲ್ಲಿ ನಡೆಯಿತು. ಕೆಲಕಾಲ ಅರ್ಜಿ ವಿಚಾರಣೆ ನಡೆಸಿದ ಪೀಠ ಹಿಂದಿನ ಮೈತ್ರಿ ಸರಕಾರದ ಆಡಳಿತ ಅವಧಿಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ಶಿಫಾರಸ್ಸಿನಂತೆ ಪೊಲೀಸ್ ಇಲಾಖೆಯಲ್ಲಿ ವರ್ಗಾವಣೆ ಮಾಡಿದ ಆರೋಪಕ್ಕೆ ಸಂಬಂಧಿಸಿ ಸಿದ್ದರಾಮಯ್ಯ, ದಿನೇಶ್ ಗುಂಡೂರಾ ವ್, ರಾಮಲಿಂಗಾ ರೆಡ್ಡಿ ಸೇರಿ 24 ಜನ ಶಾಸಕರಿಗೆ ನೋಟಿಸ್ ಜಾರಿ ಮಾಡಿ ವಿಚಾರಣೆ ಮುಂದೂಡಿತು.

ಇದಕ್ಕೂ ಮುನ್ನ ಅರ್ಜಿದಾರರ ಪರ ವಾದಿಸಿದ ವಕೀಲ ಜಿ.ಆರ್.ಮೋಹನ್ ಅವರು, ಪೊಲೀಸ್ ಇಲಾಖೆಯಲ್ಲಿ ರಾಜಕಾರಣಿಗಳ ಶಿಫಾರಸಿನಂತೆ ವರ್ಗಾವಣೆ ಮಾಡಿರುವುದು ಸಂವಿಧಾನ ಬಾಹಿರ, ಪೊಲೀಸರ ವರ್ಗಾವಣೆಯನ್ನು ಪೊಲೀಸ್ ಮಂಡಳಿಯ ತೀರ್ಮಾನದಂತೆ ವರ್ಗಾವಣೆ ನಡೆಸಬೇಕು. ಆದರೆ ಕಾಂಗ್ರೆಸ್ ಶಾಸಕರ ಶಿಫಾರಸ್ಸಿನಂತೆ ವರ್ಗಾವಣೆ ಮಾಡಿರುವುದು ಕಾನೂನು ಬಾಹಿರವಾಗಿದೆ ಎಂದು ಪೀಠಕ್ಕೆ ವಿವರಿಸಿದರು.

ಸುಪ್ರೀಂಕೋರ್ಟ್ ಹಾಗೂ ಹೈಕೋರ್ಟ್ ಹಿಂದಿನ ತೀರ್ಪಿನಲ್ಲಿ ಪೊಲೀಸ್ ಮಹಾಮಂಡಳಿ ತೀರ್ಮಾನದಂತೆ ವರ್ಗಾವಣೆ ನಡೆಯಬೇಕೆಂಬ ಸೂಚನೆ ಇದ್ದರೂ ಅದನ್ನ ಪಾಲಿಸಲಾಗಿಲ್ಲ ಎಂದು ವಾದಿಸಿ ಈ ಅರ್ಜಿಗೆ ಸಂಬಂಧಿಸಿ ಎಸ್‌ಐಟಿ ತನಿಖೆ ನಡೆಸಬೇಕು ಹಾಗೂ ಕಾಂಗ್ರೆಸ್ ಶಾಸಕರ ಶಿಫಾರಸ್ಸಿನಂತೆ ನಡೆದ ವರ್ಗಾವಣೆ ರದ್ದು ಪಡಿಸಬೇಕೆಂದು ಪೀಠಕ್ಕೆ ಮನವಿ ಮಾಡಿದರು. ಈ ವೇಳೆ ಪ್ರತಿವಾದಿಗಳಿಗೆ ಹಾಗೂ ರಾಜ್ಯ ಸರಕಾರಕ್ಕೆ ನೋಟಿಸ್ ಜಾರಿ ಮಾಡಿ ಎರಡು ವಾರದಲ್ಲಿ ಆಕ್ಷೇಪಣೆ ಸಲ್ಲಿಸಲು ಸೂಚಿಸಲಾಯಿತು.